# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಏಟ್ರಿಯಾ ಪವರ್ ಕಾರ್ಪೋರೇಷನ್ ಲಿಮಿಟೆಡ್ ಕಂಪನಿಗೆ 120 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:

1 ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: ಕೆಆರ್ಇಡಿ/08/WT-2MW/2012/269 ದಿನಾಂಕ 17/23.01.2012. ಮತ್ತು ಕೆಆರ್ಇಡಿ/08/SRR/WT-APCL-120MW/**Bijapur**/2012/1869 ದಿನಾಂಕ 30.6/02.07.2012.

2 ದಿನಾಂಕ: 07.07.2012 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

<u>ಪ್ರಸ್ತಾವನೆ :-</u>

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ 17/23.1.2012ರ ಪತ್ರದಲ್ಲಿ ಮೆ : ವಂಡರ್ ಕೆಟ್ ಕಂಪನಿಯವರಿಗೆ ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕು ನಂದಿಹಾಳ ಮತ್ತು ಟಕ್ಕಳಕಿ ಗ್ರಾಮಗಳಲ್ಲಿ 2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ನೀಡುವಂತೆ ಕೋರಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ತದನಂತರ ದಿನಾಂಕ 30.6./02.7.2012ರ ಪತ್ರದಲ್ಲಿ ಮೆ: ವಂಡರ್ ಕೆಟ್ ಎಂಬ ಪ್ರೊಪ್ರೈಟರ್ ಸಂಸ್ಥೆಯನ್ನು ಮೆ : ವಂಡರ್ ಟೆಕ್ ವಿಂಡ್ ಪವರ್ ಪ್ರೈವೇಟ್ ಲಿಮಿಟೆಡ್ ಕಂಪನಿಯಾಗಿ ಮಾರ್ಪಡಿಸಿಕೊಂಡಿದೆ ಎಂದು ಈ ಕಂಪನಿಯು ಮೆ : ಏಟ್ರಿಯಾ ಪವರ್ ಕಾರ್ಪೋರೇಷನ್ ಲಿಮಿಟೆಡ್ ಕಂಪನಿಯ ಅಂಗ ಸಂಸ್ಥೆಯಾಗಿದ್ದು ಸದರಿ ಕಂಪನಿಯ ಹೆಸರಿನಲ್ಲಿ ಯೋಜನೆಯನ್ನು ಸ್ಥಾಪಿಸಲು ಡಿಪಿಆರ್‌ನ್ನು ಸಲ್ಲಿಸಿದ್ದು ಸದರಿ ಸ್ಥಳದಲ್ಲಿ 120 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಬಹುದಾಗಿದೆ ಎಂದು ತಿಳಿಸಿರುತ್ತಾರೆಂದು ವರದಿ ಮಾಡುತ್ತಾ ಮೆ: ಏಟ್ರಿಯಾ ಪವರ್ ಕಾರ್ಪೋರೇಷನ್ ಲಿಮಿಟೆಡ್ ಇವರಿಗೆ ಬಿಜಾಪುರ ಜಿಲ್ಲೆಯ, ಬಸವನಬಾಗೇವಾಡಿ ತಾಲ್ಲೂಕಿನ, ವಿವಿಧ ಗ್ರಾಮಗಳಲ್ಲಿ 120 ಮೆ.ವ್ಯಾ. ಪವನ ವಿದ್ಯುತ್ ಘಟಕವನ್ನು ಸ್ಥಾಪಿಸಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ ಹಾಗೂ ಈ ಘಟಕದಿಂದ ಉತ್ಪಾದಿಸುವ ವಿದ್ಯುತ್ತನ್ನು ವಿದ್ಯುತ್ ಸರಬರಾಜು ಕಂಪನಿಗೆ ಸರಬರಾಜು ಮಾಡಲು ವಿದ್ಯುತ್ ಖರೀದಿ ಒಪ್ಪಂದ ಮಾಡಿಕೊಳ್ಳಲಿರುವುದಾಗಿ ತಿಳಿಸಿರುತ್ತಾರೆ.

ದಿನಾಂಕ : 07.07.2012ರಂದು ನಡೆದ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಮೆ: ಏಟ್ರಿಯಾ ಪವರ್ ಕಾರ್ಪೋರೇಷನ್ ಲಿಮಿಟೆಡ್ ಇವರಿಗೆ 120.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ನೀಡಲು ಸಮಿತಿಯು ಶಿಫಾರಸ್ಸು ಮಾಡಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ : –

**<u>ಸರ್ಕಾರಿ ಆದೇಶ ಸಂಖ್ಯೆ : ಇಎನ್ 79 ಎನ್‌ಸಿಇ 2012,</u>**
**<u>ಬೆಂಗಳೂರು, ದಿನಾಂಕ : 27.09.2012.</u>**

ಮೆ: ಏಟ್ರಿಯಾ ಪವರ್ ಕಾರ್ಪೋರೇಷನ್ ಲಿಮಿಟೆಡ್ ಇವರಿಗೆ ಬಿಜಾಪುರ ಜಿಲ್ಲೆಯ, ಬಸವನಬಾಗೇವಾಡಿ ತಾಲ್ಲೂಕಿನ, ವಿವಿಧ ಗ್ರಾಮಗಳಲ್ಲಿ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ನಿಬಂಧನೆಗೊಳಪಟ್ಟು **120.00** ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿಯನ್ನು ನೀಡಲಾಗಿದೆ:–

.........2

File: Wind

| Toposheet No. | Proposed capacity in MW | Near by villages of the proposed area and district | Geographical area description of the project. |
|---|---|---|---|
| 47 P/14 | 120 MW (75 Nos x 1600 kW) | Nandihal, Basavanabagewadi, Masbinal, Hattarkihal and Takkalaki Villages in Basavanabagewadi Taluk, Bijapura District. | The proposed area is in plain land near Basavanabagewadi and NH-13 is crossing the area towards Kustagi and also covered in Simi Halla and area is held in the following geographical co-ordinates:<br>Latitude: 16°33'56"- 16°40'0" N<br>Longitude:75°53'44"- 75°58'03"E<br>Ridge peaks: 606, 622, 602, 623, 615 & 592m Amsl |
| Total | 120 MW | | |

1. ಈ ಯೋಜನೆಯನ್ನು ಆದೇಶ ಹೊರಡಿಸಿದ ದಿನಾಂಕದಿಂದ 3 ವರ್ಷದ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.
3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಅಲ್ಲದೇ, ಕಾಲ ಕಾಲಕ್ಕೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೊ ಸೈಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಗಳ 3 ಪ್ರತಿಗಳನ್ನು ಒಂದು ವರ್ಷದಲ್ಲಿ ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಮಂಡಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

| ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ | 5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ | ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ |
|---|---|---|
| > 200 ಕಿ.ವ್ಯಾ. ನಿಂದ 300 ಕಿ.ವ್ಯಾ | 18 | 1 |
| > 300 ಕಿ.ವ್ಯಾ. ನಿಂದ 500 ಕಿ.ವ್ಯಾ. | 15 | 1 |
| > 500 ಕಿ.ವ್ಯಾ. ನಿಂದ 750 ಕಿ.ವ್ಯಾ | 12 | 1 |
| > 750 ಕಿ.ವ್ಯಾ. ನಿಂದ 1000 ಕಿ.ವ್ಯಾ | 8 ರಿಂದ 10 | 1 |

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ ಇಲಾಖೆ, ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯುತಕ್ಕದ್ದು.

7. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನೀತಿ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

8. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009ರನ್ವಯ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.

9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

11. ಸದರಿ ಆದೇಶವನ್ನು ರದ್ದುಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೌಸಲ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ :**

1 ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಮತ್ತು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು-1.
2 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು
3 ಉಪ ಅರಣ್ಯ ಸಂರಕ್ಷಣಾಧಿಕಾರಿ ಬಿಜಾಪುರ ಜಿಲ್ಲೆ, ಬಿಜಾಪುರ
4 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೋರೇಟ್ ಕಛೇರಿ, ನವನಗರ, ಹುಬ್ಬಳ್ಳಿ-580 025.
6 ಜಿಲ್ಲಾಧಿಕಾರಿಗಳು, ಬಿಜಾಪುರ ಜಿಲ್ಲೆ, ಬಿಜಾಪುರ
7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
8 ಸರ್ಕಾರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
9 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
10 ಮೆ:: ಏಟ್ರಿಯಾ ಪವರ್ ಕಾರ್ಪೋರೇಷನ್ ಲಿಮಿಟೆಡ್, ನಂ 1, ಪ್ಯಾಲೆಸ್ ರೋಡ್, ಬೆಂಗಳೂರು-01.
11 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.